## ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ 46/2014

| **ಚಾಸಾ ಃ** | **6** | **ಪ್ರಾಸಾಃ-** | **6** |
|---|---|---|---|

| | |
|---|---|
| ಹೆಸರು | ಮಧು |
| ತಂದೆಯ ಹೆಸರು | ಮಹದೇವ |
| ವಯಸ್ಸು | 33 |
| ಉದ್ಯೋಗ | ಚಾಲಕ |
| ವಿಳಾಸ | ಕನಕಪುರ |

- - - - - - - - - - - - - - - - - - - - - - - - - - - - - - - -

**ದಿಃ26.06.2023ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ಆರೋಪಿತನ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಜಪ್ತಿಪಡಿಸಿಲ್ಲ. ನನಗೆ ಈಗ ತೋರಿಸಿದ ಮತ್ತೊಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು.

ನಿಪಿ-3 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.08.03.2012 ರಂದು ಸಂಜೆ 5ಃ00 ರಿಂದ 5ಃ30 ಗಂಟೆ ಸಮಯದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-3 ರಂತೆ ಪಂಚನಾಮ ಕ್ರಮ ಜರುಗಿಸಿ ಲಾರಿಯನ್ನು ಪೊಲೀಸರು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**